<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ</u>

C.C: 3075/2023
CW-24 PW-3

ಹೆಸರು : ಪ್ರಕಾಶ್ ಯಾತನೂರ

ತಂದೆಯ ಹೆಸರು : ರೇವಣಸಿದ್ದಪ್ಪ

ವಯಸ್ಸು : 41 ವರ್ಷ

ಉದ್ಯೋಗ : ಸಿಪಿಐ ಪೋಲೀಸ್ ಪ್ರಧಾನ ಕಛೇರಿ ಬೆಂಗಳೂರು

ವಾಸ ಸ್ಥಳ : ಬೆಂಗಳೂರು

---

<u>ಪ್ರಮಾಣವಚನ ಭೋಧಿಸಲಾಯಿತು. ದಿಃ 09.03.2026</u>

<u>ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ</u>

ನಾನು 2022 ರಿಂದ 2023ರ ವರೆಗೆ ಸಿ.ಪಿ.ಐ. ಚಿತ್ತಾಪೂರ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ: 30-06-2023ರಂದು ಈ ಪ್ರಕರಣದ ಕಡತವನ್ನು ಚಾಸಾ-23ರವರಿಂದ ಪಡದು ಮುಂದಿನ ತನಿಖೆಯನ್ನು ಜರುಗಿಸಿರುತ್ತೇನೆ. ಅದೇ ದಿನ ಚಾಸಾ-13ರವರ ಹೇಳಿಕೆಯನ್ನು ಪಡೆದಿರುತ್ತೇನೆ. ಅದೇ ದಿನ ಅಪಘಾತಕ್ಕೀಡಾದ ವಾಹನದ ಐ.ಎಂ.ವ್ಹಿ. ವರದಿಯನ್ನು ಪಡೆದಿರುತ್ತೇನೆ.

ದಿನಾಂಕ: 15-07-2023ರಂದು ಅಪಘಾತ ಸ್ಥಳದ ನಕಾಶೆಯನ್ನು ಚಾಸಾ-18ರವರಿಂದ ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ದಿನಾಂಕ: 08-09-2023ರಂದು ಚಾಸಾ-6ರವರ ಗಾಯದ ಪ್ರಮಾಣ ಪತ್ರವನ್ನು ಚಾಸಾ-16ರವರಿಂದ ಪಡದಿರುತ್ತೇನೆ.

ನಂತರ ತನಿಖೆ ಪೂರ್ತಿಯಾದ ನಂತರ ಆರೋಪಿತನ ವಿರುದ್ಧ ಸಾಕ್ಷ್ಯಾಧಾರಗಳು ಇದ್ದ ಕಾರಣ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ.

ನಾನು ಸ್ವೀಕರಿಸಿದ ಐ.ಎಂ.ವ್ಹಿ. ವರದಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ಗುರುತಿಸಿದ ಐ.ಎಂ.ವ್ಹಿ. ವರದಿಯನ್ನು ನಿಶಾನೆ ಪಿ-4 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ-4(ಎ) ಎಂದು ಗುರುತಿಸಲಾಯಿತು. ನಾನು ಸ್ವೀಕರಿಸಿದ ಗಾಯದ ಪ್ರಮಾಣ ಪತ್ರವನ್ನು ನೋಡಿದರೆ ಗುರುತಿಸುತ್ತೆನೆ. ಸಾಕ್ಷಿ ಗುರುತಿಸಿದ ಚಾಸಾ-6ರವರ ಗಾಯದ ಪ್ರಮಾಣ ಪತ್ರವನ್ನು ನಿಶಾನೆ ಪಿ-5ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ-5(ಎ) ಎಂದು ಗುರುತಿಸಲಾಯಿತು. ನಾನು ಸ್ವೀಕರಿಸಿದ ಸ್ಥಳದ ನಕಾಶೆಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ಗುರುತಿಸಿದ ಸ್ಥಳದ ನಕಾಶೆಯ ವರದಿ ಹಾಗೂ ನಕಾಶೆಯನ್ನು ಒಟ್ಟಾಗಿ ನಿಶಾನೆ ಪಿ-6 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ-6(ಎ) ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಹೆಚ್.ಎನ್.ಎಸ್. ವಕೀಲರಿಂದ :</u>

ನೀವು ನಿಮ್ಮ ಮುಖ್ಯ ವಿಚಾರಣೆಯಲ್ಲಿ ಹೇಳಿದಂತೆ ಯಾವುದೇ ವರದಿಗಳನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ. ಆರೋಪಿತ ಯಾವುದೇ ಗುನ್ನೆ ಮಾಡಿಲ್ಲ ಎಂದು ಕಂಡುಬಂದಿದ್ದರೂ ಸಹ ತಪ್ಪಾಗಿ ಅಂತಿಮ ವರದಿಯನ್ನು ಸಲ್ಲಿಸಿದ್ದೀರಿ ಎಂದರೆ ಸರಿಯಲ್ಲ. ಆರೋಪಿತ ಯಾವುದೇ ಗುನ್ನೆ ಮಾಡಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲಾ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು,

ಚಿತ್ತಾಪೂರ.